ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 05-03-2021 ಪ್ರಶ್ನೆ ಸಂಖ್ಯೆ : 594 (734)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 05-03-2021

ಉತ್ತರಿಸುವ ಸಚಿವರು: ಮಾನ್ಯ ಕೃಷಿ ಸಚಿವರು

ವಿಷಯ : ಕೃಷಿ ಇಲಾಖೆಯಿಂದ ಟ್ರಾಕ್ಟರ್, ಟ್ರೇಲರ್ ಹಾಗೂ ಇತರೆ ಸಲಕರಣೆಗಳನ್ನು ಪಡೆಯಲು ಇರುವ ಮಾನದಂಡಗಳ ಬಗ್ಗೆ

(ಅ) ಕಳೆದ 03 ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ಮಂಜೂರು ಮಾಡಿದ ಅನುದಾನವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಜೂರು ಮಾಡಲಾದ ಅನುದಾನದಲ್ಲಿ ಯಾವ-ಯಾವ ಕಾರ್ಯಕ್ರಮಗಳಿಗೆ ಎಷ್ಟೆಷ್ಟು ಅನುದಾನ ಬಳಕೆ ಮಾಡಲಾಗಿದೆ ; (ತಾಲ್ಲೂಕುವಾರು, ಯೋಜನೆವಾರು ಬಳಕೆ ಮಾಡಿದ ಅನುದಾನದ ವಿವರ ನೀಡುವುದು)

(ಇ) ರೈತರಿಗೆ ಕೃಷಿ ಇಲಾಖೆಯಿಂದ ಟ್ರಾಕ್ಟರ್, ಟ್ರೇಲರ್ ಹಾಗೂ ಇತರೆ ಸಲಕರಣೆಗಳನ್ನು ಪಡೆಯಲು ಇರುವ ಮಾನದಂಡಗಳೇನು; ಈ ಪರಿಕರಗಳನ್ನು ಪಡೆಯಲು ರೈತರಿಗೆ ಸರ್ಕಾರದಿಂದ ನಿಗದಿಪಡಿಸಲಾದ ಸಬ್ಸಿಡಿ ದರವೆಷ್ಟು;

(ಈ) ಪ್ರಸ್ತುತ ಸಾಲಿನಲ್ಲಿ ಪರಿಕರಗಳನ್ನು ಪಡೆಯಲು ಅಂದರೆ ಟ್ರಾಕ್ಟರ್, ಟ್ರೇಲರ್‌ಗಳಿಗಾಗಿ ಬಂದಿರುವ ಫಲಾನುಭವಿಗಳ ಸಂಖ್ಯೆಯೆಷ್ಟು; ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗದವರಿಗೆ ನಿಗಧಿಪಡಿಸಲಾದ ಗುರಿಯೆಷ್ಟು ;

(ಉ) ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ರೈತರ ಅಭಿವೃದ್ಧಿಗಾಗಿ ಹಮ್ಮಿಕೊಂಡಿರುವ ಯೋಜನೆಗಳಾವುವು ; ಈ ಯೋಜನೆಗಳಡಿ ರೈತರಿಗೆ ಸಿಗುವ ಸವಲತ್ತುಗಳಾವುವು ? (ಯೋಜನೆವಾರು ವಿವರ ನೀಡುವುದು)